## 1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್

## CC No.776/2021

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಡಾಃ ಹನುಮರೆಡ್ಡಿ ಕೊಳ್ಳಿ | ಪಿಡಬ್ಲ್ಯೂ | 11 |
| ತಂದೆ ಹೆಸರು | : | ವೆಂಕರೆಡ್ಡಿ ಕೊಳ್ಳಿ | ಸಿ ಡಬ್ಲ್ಯೂ | 15 |
| ವಯಸ್ಸು | : | 42 ವರ್ಷ | | |
| ಉದ್ಯೋಗ | : | ಸ್ತ್ರೀ ರೋ ತಜ್ಞರು, ತಾಲೂಕ ಆಸ್ಪತ್ರೆ ಬ್ಯಾಡಗಿ | | |
| ವಾಸ ಸ್ಥಳ | : | ಹಾವೇರಿ | | |

**ದಿನಾಂಕ: 01.07.2026 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

ನಾನು ಡಿಸೆಂಬರ 2014 ರಿಂದ ಜೂನ್ 2025 ರವರೆಗೆ ಜಿಲ್ಲಾ ಆಸ್ಪತ್ರೆ ಹಾವೇರಿಯಲ್ಲಿ ಸ್ತ್ರೇ ರೋಗ ತಜ್ಞನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 23.11.2015 ರಂದು ಸಾಯಂಕಾಲ 08.00 ರ ಸಮಯದಲ್ಲಿ ಆರೋಪಿ ಅಪಘಾತದಲ್ಲಿ ಗಾಯಗೊಂಡ ಹಿನ್ನಲೆಯಲ್ಲಿ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಬಂದಿದ್ದರು. ಸದರಿಯವರನ್ನು ಪರೀಕ್ಷಿಸಿದಾಗ ಈ ಕೆಳಕಂಡ ಗಾಯಗಳು ಕಂಡು ಬಂದಿದ್ದವು.

1. ಎಡ ಮುಗ್ಗೆ ಮೇಲೆ ಬಾವು ಬಂದಿತ್ತು.

ಸದರಿ ಆರೋಪಿಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಿಮ್ಸ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇವೆ. ಸದರಿ ಗಾಯ ಸಾದ ಸ್ವರೂಪದ ಗಾಯ ಆಗಿತ್ತು. ಸದರಿ ಆರೋಪಿಗೆ ಚಿಕಿತ್ಸೆ ನೀಡಿದ ಬಗ್ಗೆ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಸಾಕ್ಷಿ ಸದರಿ ಗಾಯ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-12 ಎಂದು ಸಾಕ್ಷಿಂದು ಸಹಿಯನ್ನು ನಿಪಿ-12 (ಎ) ಎಂದು ಗುರುತಿಸಲಾಯಿತು.

**:ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಆರೋಪಿ ಹಾಜರಿದ್ದು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು ಯಾವುದೇ ಸಮಂಜಸವಾದ ಕಾರಣ ಇಲ್ಲದಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

: ಮರುವಿಚಾರಣೆ : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-
1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ ಹಾನಗಲ್